**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ಶ್ರೀ ಎನ್. ಸಣ್ಣನಿಂಗೇಗೌಡ, ಹಿಂದಿನ ಅಧ್ಯಕ್ಷರು, ಅರಳಕುಪ್ಪೆ ಗ್ರಾಮ ಪಂಚಾಯಿತಿ, ಪಾಂಡವಪುರ ತಾಲ್ಲೂಕು, ಮಂಡ್ಯ ಜಿಲ್ಲೆ ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43(ಎ)(vi) ರನ್ವಯ ಕ್ರಮ ಕೈಗೊಳ್ಳುವ ಬಗ್ಗೆ.

**ಓದಲಾಗಿದೆ:**

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಮಂಡ್ಯ ಇವರ ಪತ್ರ ಸಂಖ್ಯೆ:ಉಕಾ2:ಸಿ3:ಸಿಆರ್:39/2018-19, ದಿನಾಂಕ:15.11.2018.
2. ಸರ್ಕಾರದ ಆದೇಶ ಪತ್ರ ಸಂಖ್ಯೆ:ಗ್ರಾಅಪ 1135 ಗ್ರಾಪಂಅ 208, ದಿನಾಂಕ:02.02.2019.
3. ಸರ್ಕಾರದ ಪತ್ರ ಸಂಖ್ಯೆ: ಗ್ರಾಅಪ 1219 ಗ್ರಾಪಂಅ 2018, ದಿನಾಂಕ:18.03.2019.
4. ಪ್ರಾದೇಶಿಕ ಆಯುಕ್ತರು, ಮೈಸೂರು ವಿಭಾಗ, ಮೈಸೂರು ಇವರ ಪತ್ರ ಸಂಖ್ಯೆ:ಚುನಾವಣೆ ಸಿಆರ್ 40/18-19, ದಿನಾಂಕ:26.03.2020.
5. ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್ ಸಂಖ್ಯೆ: ಗ್ರಾಅಪ 364 ಗ್ರಾಪಂಅ 2020, ದಿನಾಂಕ:06.05.2020.
6. ಶ್ರೀ ಎನ್. ಸಣ್ಣನಿಂಗೇಗೌಡ, ಹಿಂದಿನ ಅಧ್ಯಕ್ಷರು, ಅರಳಕುಪ್ಪೆ ಗ್ರಾಮ ಪಂಚಾಯಿತಿ, ಪಾಂಡವಪುರ ತಾಲ್ಲೂಕು, ಮಂಡ್ಯ ಜಿಲ್ಲೆ ಇವರ ಲಿಖಿತ ಸಮಜಾಯಿಷಿ ದಿನಾಂಕ:08.06.2020.
7. ಸರ್ಕಾರದ ವಿಚಾರಣಾ ನೋಟೀಸು ಸಂಖ್ಯೆ: ಗ್ರಾಅಪ 364 ಗ್ರಾಪಂಅ 2020, ದಿನಾಂಕ:30.12.2020.

***

ಶ್ರೀ ಎನ್. ಸಣ್ಣನಿಂಗೇಗೌಡ, ಹಿಂದಿನ ಅಧ್ಯಕ್ಷರು, ಅರಳಕುಪ್ಪೆ ಗ್ರಾಮ ಪಂಚಾಯಿತಿ, ಪಾಂಡವಪುರ ತಾಲ್ಲೂಕು, ಮಂಡ್ಯ ಜಿಲ್ಲೆ ಇವರು ಮಂಡ್ಯ ಜಿಲ್ಲೆ, ಪಾಂಡವಪುರ ತಾಲ್ಲೂಕು,(ಇನ್ನು ಮುಂದೆ ಎದುರುದಾರರು ಎಂದು ಕರೆಯಲ್ಪಡುತ್ತಾರೆ) ಇವರು ತಮ್ಮ ಅಧಿಕಾರಾವಧಿಯಲ್ಲಿ ಈ ಕೆಳಕಂಡ ಆರೋಪಗಳನ್ನು ಎಸಗಿರುವುದಾಗಿ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಮಂಡ್ಯ ಜಿಲ್ಲೆ ರವರು ಮೇಲೆ ಓದಲಾದ ಕ್ರಮಾಂಕ (1)ರಲ್ಲಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

**ದೋಷಾರೋಪಣೆ:-**

ಮಂಡ್ಯ ಜಿಲ್ಲೆ, ಪಾಂಡವಪುರ ತಾಲ್ಲೂಕು, ಅರಳಕುಪ್ಪೆ ಗ್ರಾಮ ಪಂಚಾಯಿತಿಯಲ್ಲಿ ಎಸ್.ಇ.ಸಿ.ಸಿ. 2011 ರ ಪಟ್ಟಿಯಲ್ಲಿರುವ ಫಲಾನುಭವಿಗಳ ಹೆಸರುಗಳನ್ನು ಕೈಬಿಟ್ಟು ಹೊಸದಾಗಿ ಫಲಾನುಭವಿಗಳನ್ನು ಸೇರಿಸಿ, ಆಡಳಿತ ದುರುಪಯೋಗಪಡಿಸಿಕೊಂಡಿರುವುದು ಹಾಗೂ ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ ತಮ್ಮ ಪತ್ನಿ ಹೆಸರಿನಲ್ಲಿ ಕೃಷಿ ಹೊಂಡ, ದನದ ಕೊಟ್ಟಿಗೆ, ಎರೆಹುಳು ಘಟಕ, ನೀರಿನ ತೊಟ್ಟಿ ನಿರ್ಮಾಣ ಮಾಡಿಸಿ, ಅಧಿಕಾರ ದುರುಪಯೋಗಪಡಿಸಿಕೊಂಡಿರುವುದು ಹಾಗೂ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಒಬ್ಬ ವೈಯಕ್ತಿಕ ಫಲಾನುಭವಿಗೆ ಒಂದು ಆರ್ಥಿಕ ವರ್ಷದಲ್ಲಿ ರೂ.50,000/- ಸಹಾಯಧನ ಪಡೆಯಲು ಅವಕಾಶವಿದ್ದು, ಶ್ರೀ ಸಣ್ಣನಿಂಗೇಗೌಡ

ರವರು ಅವರ ಪತ್ನಿ ಶ್ರೀಮತಿ ಮೀನಾಕ್ಷಿರವರ ಹೆಸರಿನಲ್ಲಿ 2016-17ನೇ ಸಾಲಿನಲ್ಲಿ ವೈಯಕ್ತಿಕ ಕಾಮಗಾರಿಗಳಿಗೆ ಒಟ್ಟು ರೂ.1,26,122/- ರೂ.ಗಳ ಸಹಾಯಧನ ಪಡೆದಿದ್ದು, ಇದರಿಂದ ಹಿಂದಿನ ಅಧ್ಯಕ್ಷರಾದ ಶ್ರೀ ಸಣ್ಣನಿಂಗೇಗೌಡ ರವರು ರೂ.76,122/-ಗಳ ಸಹಾಯಧನ ಹೆಚ್ಚುವರಿಯಾಗಿ ಪಡೆದಿರುವುದು ಕಂಡು ಬಂದಿರುತ್ತದೆ.

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ 43(ಎ), 48(4) ಮತ್ತು 48(5) ರಡಿ ಗ್ರಾಮ ಪಂಚಾಯಿತಿ ಅಧ್ಯಕ್ಷರು, ಉಪಾಧ್ಯಕ್ಷರುಗಳು ಹಾಗೂ ಸದಸ್ಯರುಗಳ ಮೇಲಿನ ಆರೋಪಗಳಿಗೆ ವಿಚಾರಣೆ ನಡೆಸಲು ಮೇಲೆ ಕ್ರಮಾಂಕ (2)ರಲ್ಲಿ ಪ್ರಾದೇಶಿಕ ಆಯುಕ್ತರುಗಳಿಗೆ ಅಧಿಕಾರ ಪ್ರತ್ಯಾಯೋಜಿಸಲಾಗಿದ್ದು, ಅದರನ್ವಯ ಸದರಿ ಪ್ರಕರಣದ ವಿಚಾರಣೆ ನಡೆಸಿ, ಸರ್ಕಾರಕ್ಕೆ ಸಲ್ಲಿಸುವಂತೆ ಮೇಲೆ ಓದಲಾದ ಕ್ರಮಾಂಕ (3)ರ ಪತ್ರದಲ್ಲಿ ಈ ಪ್ರಕರಣವನ್ನು ಪ್ರಾದೇಶಿಕ ಆಯುಕ್ತರು, ಮೈಸೂರು ವಿಭಾಗ, ಮೈಸೂರು ರವರಿಗೆ ವಹಿಸಲಾಗಿತ್ತು.

ಅದರಂತೆ, ಪ್ರಾದೇಶಿಕ ಆಯುಕ್ತರು, ಮೈಸೂರು ವಿಭಾಗ, ಮೈಸೂರು ಇವರು ಈ ಪ್ರಕರಣದ ವಿಚಾರಣೆ ನಡೆಸಿ, ಎದುರುದಾರರಾದ ಶ್ರೀ ಸಣ್ಣನಿಂಗೇಗೌಡ, ರವರು ತಮ್ಮ ಅಧಿಕಾರಾವಧಿಯಲ್ಲಿ ಅಧಿಕಾರ ದುರುಪಯೋಗಪಡಿಸಿಕೊಂಡಿರುವುದು ಸಾಬೀತಾಗಿದ್ದು, ಸದರಿಯವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 48(4) ರನ್ವಯ ಕ್ರಮ ಜರುಗಿಸಬಹುದಾಗಿ, ಅಭಿಪ್ರಾಯಪಟ್ಟು ಮೇಲೆ ಓದಲಾದ ಕ್ರಮಾಂಕ (4)ರಲ್ಲಿ ಸರ್ಕಾರಕ್ಕೆ ವರದಿಯನ್ನು ಸಲ್ಲಿಸಿರುತ್ತಾರೆ.

ಪ್ರಾದೇಶಿಕ ಆಯುಕ್ತರ ಅಭಿಪ್ರಾಯದನ್ವಯ ಕ್ರಮವಹಿಸುವ ಪೂರ್ವದಲ್ಲಿ ಎದುರುದಾರರಾದ ಶ್ರೀ ಸಣ್ಣನಿಂಗೇಗೌಡ, ಮೇಲೆ ಓದಲಾದ ಕ್ರಮಾಂಕ (5)ರಲ್ಲಿ ಎರಡನೇ ಕಾರಣ ಕೇಳುವ ನೋಟೀಸ್ ಜಾರಿ ಮಾಡಲಾಗಿದ್ದು, ಮೇಲೆ ಓದಲಾದ ಕ್ರಮಾಂಕ(6) ರಲ್ಲಿ ಕೆಳಕಂಡಂತೆ ಲಿಖಿತ ಸಮಜಾಯಿಷಿಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

> " ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ನೋಡಲ್ ಅಧಿಕಾರಿ ತಾಲ್ಲೂಕು ಪಂಚಾಯಿತಿ ಕಾರ್ಯದರ್ಶಿ ಕಾರ್ಯಾಲಯದ ಅಧಿಕಾರಿಗಳು ಹೀಗೆ ಮನೆ ಮಂಜೂರು ಮಾಡಲು ಹಾಗೂ ಹಣ ಬಿಡುಗಡೆ ಮಾಡಲು ಸಂಬಂಧಿಸಿದ ಅಧಿಕಾರಿಗಳ ಮೇಲೆ ಯಾವುದೇ ಆಪಾದನೆಯನ್ನು ಪರಿಗಣಿಸದೇ ನಾನು ಅರ್ಜಿ ನಮೂನೆಗೆ ಸಹಿ ಮಾಡಿದ್ದೇನೆ ಎಂಬ ಕಾರಣಕ್ಕೆ ಆಪಾದನೆ ಪಟ್ಟಿ ಮಾಡಿ ವರದಿ ನೀಡಿರುತ್ತಾರೆ. ಅಂದರೆ, ಸರ್ಕಾರದ ಅಧಿಕಾರಿಗಳು ಮಾಡಿರುವ ತಪ್ಪನ್ನು ಮುಚ್ಚಿ ಹಾಕಿ ಜನ ಪ್ರತಿನಿಧಿ ಮೇಲೆ ಆಪಾದನೆ ಮಾಡಿರುವುದು ಸರಿಯಲ್ಲ ಮತ್ತು ನರೇಗಾ ಅಡಿಯಲ್ಲಿ ಈಗಾಗಲೇ ಹೇಳಿಕೆ ನೀಡಿದ್ದು, ನಾನು ಅಧ್ಯಕ್ಷರು ಹಾಗೂ ಸದಸ್ಯರು ಎಂಬ ಕಾರಣಕ್ಕೆ ನನ್ನ ಹೆಸರಿಗೆ ಯಾವುದೇ ಕಾಮಗಾರಿ ನೀಡಿರುವುದಿಲ್ಲ. ಒಬ್ಬ ಫಲಾನುಭವಿ ಜೀವಿತ ಅವಧಿಯಲ್ಲಿ ರೂ.1,75,000/-ಗಳು ಒಂದು ಲಕ್ಷದ ಎಪ್ಪತ್ತೈದು ಸಾವಿರ ರೂ. ಪಡೆಯಲು ನರೇಗ ಯೋಜನೆ ಅಡಿಯಲ್ಲಿ ಅವಕಾಶವಿರುವುದಾಗಿ ತಿಳಿಸುತ್ತಾ, ತನ್ನನ್ನು ಆರೋಪ ಮುಕ್ತಗೊಳಿಸುವಂತೆ ಕೋರಿರುತ್ತಾರೆ."

ಎದುರುದಾರರಿಗೆ ಅಹವಾಲು ಹೇಳಿಕೊಳ್ಳಲು ಅವಕಾಶವನ್ನು ನೀಡಲು ನಿರ್ಣಯಿಸಿ, ಮೇಲೆ ಓದಲಾದ ಕ್ರಮಾಂಕ(7) ರಲ್ಲಿ ವಿಚಾರಣಾ ನೋಟಿಸ್ಸನ್ನು ಜಾರಿ ಮಾಡಿ ಪ್ರಕರಣವನ್ನು ದಿನಾಂಕ:13.01.2021 ರಂದು

ಪ್ರಧಾನ ಕಾರ್ಯದರ್ಶಿಯವರ ಅರೆನ್ಯಾಯಿಕ ನ್ಯಾಯಾಲಯದಲ್ಲಿ ವಿಚಾರಣೆಗೆ ಒಳಪಡಿಸಲಾಗಿದೆ.

ಎದುರುದಾರರಾದ ಶ್ರೀ ಸಣ್ಣನಿಂಗೇಗೌಡರವರು ಸದರಿ ವಿಚಾರಣೆಗೆ ಹಾಜರಾಗಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ತಯಾರಿಸಿದ ಪಟ್ಟಿಗೆ ತಾನು ಸಹಿ ಹಾಕಿರುವುದಾಗಿಯೂ ಹಾಗೂ ತಾನು ಆ ಪಟ್ಟಿಯನ್ನು ತಯಾರಿಸಿರುವುದಿಲ್ಲ. ಅಲ್ಲದೇ ಮಹಾತ್ಮ ಗಾಂಧಿ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ಹೆಚ್ಚುವರಿ ಹಣ ಪಡೆದಿರುವುದಕ್ಕೆ ಸಂಬಂಧಿಸಿದಂತೆ ತಾನು ಯಾವುದೇ ಅರ್ಜಿ ಸಲ್ಲಿಸಿರುವುದಿಲ್ಲ ಹಾಗೂ ಕೂಲಿ ಕೆಲಸ ನಿರ್ವಹಿಸಿರುವುದಕ್ಕೆ ನೇರವಾಗಿ ಜಾಬ್ ಕಾರ್ಡ್‌ಗೆ ಹಣ ಪಾವತಿಯಾಗಿರುತ್ತದೆ ಎಂಬುದಾಗಿ ಅಹವಾಲು ಸಲ್ಲಿಸಿರುತ್ತಾರೆ ಆದರೆ ಪ್ರಕರಣಕ್ಕೆ ಸಂಬಂಧಿಸಿದಂತೆ ಯಾವುದೇ ದಾಖಲೆಗಳನ್ನು ಸಲ್ಲಿಸಿರುವುದಿಲ್ಲ. ಮುಂದುವರೆದು, ಶ್ರೀ. ಸಣ್ಣನಿಂಗೇಗೌಡ ಇವರಿಗೆ ತಮ್ಮದೇನಾದರು ಹೇಳಿಕೆ ಇದ್ದಲ್ಲಿ ದಾಖಲಿಸಿಕೊಳ್ಳುವುದಾಗಿ ಕೋರಲಾಗಿ ಸದರಿಯವರು ತನ್ನ ಹೇಳಿಕೆ ಏನುಇಲ್ಲವೆಂದು ಉತ್ತರಿಸಿರುತ್ತಾರೆ. ಹಾಗೂ ತನ್ನ ಲಿಖಿತ ಹೇಳಿಕೆಯನ್ನು ಪರಿಗಣಿಸಿ ತನ್ನನ್ನು ಆರೋಪಮುಕ್ತಗೊಳಿಸಬೇಕೆಂದು ಕೋರಿರುತ್ತಾರೆ.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಮಂಡ್ಯ ಜಿಲ್ಲೆ ಇವರು ಸಲ್ಲಿಸಿರುವ ದಾಖಲೆಗಳು, ಪ್ರಾದೇಶಿಕ ಆಯುಕ್ತರು, ಮೈಸೂರು ವಿಭಾಗ, ಮೈಸೂರು ಇವರ ವರದಿಯನ್ನು ಹಾಗೂ ಎದುರುದಾರರಾದ ಶ್ರೀ ಸಣ್ಣನಿಂಗೇಗೌಡ, ಇವರ ಹೇಳಿಕೆಯನ್ನು ಪರಿಶೀಲಿಸಲಾಗಿದೆ. ಗ್ರಾಮೀಣಾಭಿವೃದ್ಧಿ ಆಯುಕ್ತಾಲಯದ ಪತ್ರ ಸಂಖ್ಯೆ: ಗ್ರಾಅಪ 221 ಉಖಾಯೋ 2014, ದಿನಾಂಕ:01.03.2014 ರಲ್ಲಿ ಮಹಾತ್ಮ ಗಾಂಧಿ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ಒಬ್ಬ ವೈಯಕ್ತಿಕ ಫಲಾನುಭವಿ ಒಂದು ಆರ್ಥಿಕ ವರ್ಷದಲ್ಲಿ ರೂ.50,000/-ಗಳ ಸಹಾಯ ಧನ ಪಡೆಯಲು ಅವಕಾಶವಿರುವುದಾಗಿ, ತಿಳಿಸಲಾಗಿದೆ. ಅದ್ದರಿಂದ ಆಪಾದಿತ ಹಿಂದಿನ ಅಧ್ಯಕ್ಷರು, ಪ್ರಸ್ತಾಪಿಸಿರುವಂತೆ ನರೇಗಾ ಯೋಜನೆಯಡಿ ರೂ.1,75,000/-ಗಳನ್ನು ಪಡೆಯಲು ಅವಕಾಶವಿರುವ ಹೇಳಿಕೆಯನ್ನು ತಿರಸ್ಕರಿಸಲಾಗಿದೆ. ಅಲ್ಲದೇ ತಾನು ಪಟ್ಟಿಯನ್ನು ತಯಾರಿಸಿರುವುದಿಲ್ಲ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯವರು ತಯಾರಿಸಿದ ಪಟ್ಟಿಗೆ ತಾನು ಸಹಿಯನ್ನು ಮಾತ್ರ ಹಾಕಿದ್ದೇನೆ ಎಂಬ ಹೇಳಿಕೆಯನ್ನು ಒಪ್ಪಲು ಸಾಧ್ಯವಿಲ್ಲ.

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ಅಧಿನಿಯಮ ಪ್ರಕರಣ 43(ಎ) ಹಾಗೂ 48(4) ರಡಿ ಸದರಿ ಪ್ರಕರಣವನ್ನು ಪರಿಶೀಲಿಸಿದಾಗ, ಹಿಂದಿನ ಅಧ್ಯಕ್ಷರು, ತಮ್ಮ ಅಧಿಕಾರವಧಿಯಲ್ಲಿ ಅಧಿಕಾರ ದುರುಪಯೋಗಪಡಿಸಿಕೊಂಡಿರುವುದು ಸಾಬೀತಾಗಿರುವುದರಿಂದ ಸದರಿಯವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್(ತಿದ್ದುಪಡಿ) ಅಧಿನಿಯಮ 2020 ರ ಪ್ರಕರಣ 43(ಎ)(vi) ರಡಿ ಮಂಡ್ಯ ಜಿಲ್ಲೆ, ಪಾಂಡವಪುರ ತಾಲ್ಲೂಕು, ಅರಳಕುಪ್ಪೆ ಗ್ರಾಮ ಪಂಚಾಯಿತಿಯ ಅಧ್ಯಕ್ಷ ಹಾಗೂ ಸದಸ್ಯತ್ವ ಸ್ಥಾನದಿಂದ ತೆಗೆದುಹಾಕಲು ನಿರ್ಧರಿಸಿ,

ಅದರಂತೆ ಈ ಕೆಳಕಂಡ ಆದೇಶ

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ364 ಗ್ರಾಪಂಅ 2020, ಬೆಂಗಳೂರು, ದಿನಾಂಕ:23.02.2021.</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಶ್ರೀ ಎನ್. ಸಣ್ಣನಿಂಗೇಗೌಡ, ಹಿಂದಿನ ಅಧ್ಯಕ್ಷರು, ಅರಳಕುಪ್ಪೆ ಗ್ರಾಮ ಪಂಚಾಯಿತಿ, ಪಾಂಡವಪುರ ತಾಲ್ಲೂಕು, ಮಂಡ್ಯ ಜಿಲ್ಲೆ ಇವರ ವಿರುದ್ದದ ಅಧಿಕಾರ

ದುರುಪಯೋಗಪಡಿಸಿಕೊಂಡಿರುವ ಆರೋಪವು ಸಾಬೀತಾಗಿದ್ದು, ಸದರಿಯವರು ಪ್ರಸ್ತುತ ಗ್ರಾಮ ಪಂಚಾಯಿತಿಯ ಸದಸ್ಯರಲ್ಲದ ಕಾರಣ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್(ತಿದ್ದುಪಡಿ) ಅಧಿನಿಯಮ 2093ರ ಪ್ರಕರಣ 43(ಎ)(vi) ರಡಿ ಇವರನ್ನು ಸದರಿ ಅಧಿನಿಯಮದ 12(ಎಲ್) ರನ್ವಯ ಆರು ವರ್ಷಗಳ ಕಾಲ ಚುನಾವಣೆಗೆ ನಿಲ್ಲದಂತೆ ಅನರ್ಹಗೊಳಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

B. Naveenkumar 23/02/21
(ನವೀನ್‌ಕುಮಾರ್ ಬಿ.)
ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ. (ಜಿ.ಪಂ)

**ಗೆ:**

1) ಪ್ರಾದೇಶಿಕ ಆಯುಕ್ತರು, ಮೈಸೂರು ವಿಭಾಗ, ಮೈಸೂರು.
2) ಆಯುಕ್ತರು, ಪಂಚಾಯತ್ ರಾಜ್ ಆಯುಕ್ತಾಲಯ, ಕೆ.ಜಿ ರಸ್ತೆ, ಬೆಂಗಳೂರು.–09
3) ಮುಖ್ಯ ಕಾರ್ಯನಿರ್ವಾಹಕಾಧಿಕಾರಿ, ಜಿಲ್ಲಾ ಪಂಚಾಯಿತಿ, ಮಂಡ್ಯ ಜಿಲ್ಲೆ.
4) ಕಾರ್ಯನಿರ್ವಾಹಕಾಧಿಕಾರಿ, ತಾಲ್ಲೂಕು ಪಂಚಾಯಿತಿ ರಾಮನಗರ, ರಾಮನಗರ ಜಿಲ್ಲೆ.
5) ಶ್ರೀ ಎನ್. ಸಣ್ಣನಿಂಗೇಗೌಡ, ಹಿಂದಿನ ಅಧ್ಯಕ್ಷರು, ಅರಳಕುಪ್ಪೆ ಗ್ರಾಮ ಪಂಚಾಯಿತಿ, ಪಾಂಡವಪುರ ತಾಲ್ಲೂಕು, ಮಂಡ್ಯ ಜಿಲ್ಲೆ
6) ಗಣಕ ಕೋಶ–ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
7) ಕಛೇರಿ ಪ್ರತಿ/ಹೆಚ್ಚುವರಿ ಪ್ರತಿ.

**ಪ್ರತಿಯನ್ನು ಮಾಹಿತಿಗಾಗಿ:**

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2) ಸರ್ಕಾರದ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3) ನಿರ್ದೇಶಕರು(ಪಂ.ರಾಜ್–1), ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕರು.